**734 (718) ಶ್ರೀ ನಿಂಗಪ್ಪ ಹೆಚ್ (ಕುಣಿಗಲ್)** – ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ಅರ್ಹ ಬಿಪಿಎಲ್ ಪಡಿತರದಾರರನ್ನು ಗುರ್ತಿಸುವ ಸಮೀಕ್ಷೆಯಲ್ಲಿ ಅದಕ್ಕೆ ನಿಯೋಜಿಸಿದ ಅಧಿಕಾರಿಗಳು ಅರ್ಹರನ್ನು ಕೈ ಬಿಟ್ಟು ಕರ್ತವ್ಯ ಲೋಪವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

(ಆ) ಬಂದಿದ್ದರೆ, ಯಾವ ಅವಧಿಯೊಳಗಾಗಿ ಅಂತಹವರ ವಿರುದ್ಧ ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು,

(ಇ) ಕೈ ಬಿಟ್ಟು ಹೋಗಿರುವ ಅರ್ಹ ಫಲಾನುಭವಿಗಳನ್ನು ಗುರ್ತಿಸಿ ಪಡಿತರ ಚೀಟಿ ನೀಡುವ ಮೂಲಕ ಅವ್ಯವಸ್ಥೆಯನ್ನು ಸಂಪೂರ್ಣವಾಗಿ ಯಾವ ಅವಧಿಯೊಳಗಾಗಿ ಸರಿಪಡಿಸಲಾಗುವುದು,

(ಈ) ಪಡಿತರ ಚೀಟಿ ವಿತರಣೆಗಾಗಿ ಶೇಖಡವಾರು ನಿಗದಿ ಮಾಡಲಾಗಿದೆಯೇ, ಮಾಡಿದ್ದಲ್ಲಿ, ಬಡವರೇ ವಾಸಿಸುವ ಪ್ರದೇಶದಲ್ಲಿ ಅರ್ಹರೂ ಕೆಲವರು ಪಡಿತರ ಚೀಟಿ ಪಡೆಯುವಲ್ಲಿ ವಿಫಲರಾಗುವುದಿಲ್ಲವೆ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳುವುದು ?

**ಶ್ರೀ ಗೋವಿಂದ ಎಂ ಕಾರಜೋಳ** (ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) –

(ಅ) ಬಂದಿದೆ

(ಆ) ಲೋಪವೆಸಗಿರುವ ಪ್ರಕರಣಗಳಲ್ಲಿ ಅದಕ್ಕೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಈಗಾಗಲೇ ಕ್ರಮ ಜರುಗಿಸಲಾಗಿರುತ್ತದೆ 45 ಜನ ಅಧಿಕಾರಿ/ಸಿಬ್ಬಂದಿಯನ್ನು ಅಮಾನತ್ತು ಮಾಡಲಾಗಿದ್ದು, 79 ಅಧಿಕಾರಿ/ಸಿಬ್ಬಂದಿಗೆ ಕಾರಣ ಕೇಳಿ ನೋಟೀಸು ಜಾರಿ ಮಾಡಲಾಗಿದೆ

(ಇ) ಮನೆ ಮನೆ ಸಮೀಕ್ಷೆಯಲ್ಲಿ ಫಲಾನುಭವಿಗಳಿಗೆ ಗಣಕೀಕೃತ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗುತ್ತದೆ ಜಿಲ್ಲಾಧಿಕಾರಿಗಳಿಗೆ ಅನರ್ಹರನ್ನು ಕೈ ಬಿಟ್ಟು ಅರ್ಹ ಫಲಾನುಭವಿಗಳನ್ನು ಸೇರ್ಪಡೆ ಮಾಡಲು ನಿರ್ದೇಶನ ನೀಡಲಾಗಿರುತ್ತದೆ ಯಾವುದೇ ಅವಧಿ ನಿಗದಿಪಡಿಸಿರುವುದಿಲ್ಲ

(ಈ) ಬಿಪಿಎಲ್ ಪಡಿತರ ಚೀಟಿಗಳನ್ನು ನೀಡಲು ಶೇಕಡವಾರು ನಿಗದಿಪಡಿಸಿರುವುದಿಲ್ಲ ಮನೆ ಮನೆ ಸಮೀಕ್ಷೆಯಂತೆ ಅರ್ಹರೆಂದು ಗುರುತಿಸಿದ ಫಲಾನುಭವಿಗಳಿಗೆ ಬಿಪಿಎಲ್ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ

**735 (293) ಶ್ರೀ ನಿರಾಣಿ ಮುರುಗೇಶ್ ರುದ್ರಪ್ಪ (ಬೀಳಗಿ)** ಕೃಷಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ಬೀಳಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ರೈತರ, ನೇಕಾರರ ಹಾಗೂ ಮೀನುಗಾರರ ಸಾಲಮನ್ನಾ ಆಗಿರುವುದೆಷ್ಟು ? (ಪ್ರತ್ಯೇಕ ಕುಟುಂಬವಾರು ವಿವರ ನೀಡುವುದು)